Sl.No.of Kitabul Awkaf	Name, Class & Description of the Wakfs	Particulars of Wakf properties	Name of the Muthawalli
		12. C.T.S No. 1035/B/2 Measurement : 28.61 Sq. Mtrs. **BOUNDARIES** North : C.T.S. No. 1035/B/1 South : C.T.S. No. 1035/A East : C.T.S. No. 1038/A West : C.T.S. No. 992/1A+2A/1C **13. C.T.S No. 1037** Measurement : 267.55 Sq. Mtrs. **BOUNDARIES** North : C.T.S. No. 1035 South : Cantonment Road East : C.T.S. No. 1038 West : C.T.S. No. 1036 **14. C.T.S No. 1038/B** Measurement : 188.12 Sq. Mtrs. **BOUNDARIES** North : C.T.S. No. 992/1A+2A/1C South : Cantonment Road. East : C.T.S. No. 1039 West : C.T.S. No. 1038/A & 1038/C **15. C.T.S No. 1038/C1** Measurement : 46.82 Sq. Mtrs. **BOUNDARIES** North : C.T.S. No. 1038/A South : C.T.S. No. 1038/C East : C.T.S. No.1038/B West : C.T.S. No.1035/A **16. C.T.S No. 1039** Measurement : 585.29 Sq. Mtrs. **BOUNDARIES** North : C.T.S. No. 992/1A+2A/1C South : Cantonment Road East : C.T.S. No. 1039/1 West : C.T.S. No. 1038 **17. C.T.S No. 1039/1A/1** Measurement : 196.30 Sq. Mtrs. **BOUNDARIES** North : C.T.S. No. 992/1A+2A/1C South : Cantonment Road East : C.T.S. No. 1039/1C West : C.T.S. No. 1039	

Sl.No.of Kitabul Awkaf	Name, Class & Description of the Wakfs	Particulars of Wakf properties	Name of the Muthawalli
		18. C.T.S No. 1039/1C Measurement : 28.43 Sq. Mtrs. **BOUNDARIES** North : C.T.S. No. 1039/B South : Cantonment road East : C.T.S. No. 1040 West : C.T.S. No. 1039/1B	

This certificate is issued as per the powers delegated in order No.KBW/110/ADM/05-06 Dated:02-03-2006 of the Karnataka State Board of Wakfs.

Addl. Chief Executive Officer,
Karnataka State Board of Wakfs

PD 84

ಜಿಲ್ಲಾ ಮತ್ತು ಸತ್ರನ್ಯಾಯಾಧೀಶರಕಛೇರಿ,ಮೈಸೂರು,

ಅಧಿಸೂಚನೆ ಸಂಖ್ಯೆ: ಎಡಿಎಂಎನ್/ಎ/8261/2012 ದಿ: 29.06.2012.

ಈ ಕಛೇರಿಯ ದಿನಾಂಕ 10.06.2011ರ ಅಧಿಸೂಚನೆ ಸಂಖ್ಯೆ: ಎಡಿಎಂಎನ್/ಎ/7597/2011ರ ಅನ್ವಯ, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು ಘಟಕದಲ್ಲಿ ಹೊಸದಾಗಿ ಸೃಜಿಸಲಾದ ಕೋರ್ಟ್ ಮ್ಯಾನೇಜರ್ ಎಂಬ ತಾತ್ಕಾಲಿಕ ಹುದ್ದೆಯ ಸಹಾಯಕ ಸಿಬ್ಬಂದಿಗಳಾಗಿ ಶೀಘ್ರಲಿಪಿಗಾರರು, ಪ್ರಥಮ ದರ್ಜೆ ಸಹಾಯಕರು, ಬೆರಳಚ್ಚುಗಾರರು ಮತ್ತು ಸೇವಕರ ಹುದ್ದೆಗಳ ಭರ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಆದರೆ, ಸದರಿ ಹುದ್ದೆಗಳ ಮೀಸಲಾತಿಯನ್ನು ಮರುನಿಗದಿಪಡಿಸಬೇಕಾಗಿರುವುದರಿಂದ, ಸದರಿ ನೇಮಕಾತಿ ಅಧಿಸೂಚನೆಯನ್ನು ರದ್ದುಗೊಳಿಸಲಾಗಿದೆ.

ಮೋಹನ್ ಶ್ರೀಪಾದ್ ಸಂಕೊಳ್ಳಿ
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮೈಸೂರು.

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಮೈಸೂರು

ಅಧಿಸೂಚನೆ ಸಂಖ್ಯೆ:ಆಡಳಿತ/ಅ/8262/2012, ದಿ: 30.06.2012

ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು ಘಟಕದಲ್ಲಿ ಹೊಸದಾಗಿ ಕೋರ್ಟ್ ಮ್ಯಾನೇಜರ್ ಎಂಬ ತಾತ್ಕಾಲಿಕ ಹುದ್ದೆಯನ್ನು ಸೃಜಿಸಲಾಗಿದ್ದು, ಅವರಿಗೆ ಸಹಾಯಕ ಸಿಬ್ಬಂದಿಯಾಗಿ ಶೀಘ್ರಲಿಪಿಗಾರರು, ಪ್ರಥಮ ದರ್ಜೆ ಸಹಾಯಕರು, ಬೆರಳಚ್ಚುಗಾರರು ಮತ್ತು ಸೇವಕರ ಹುದ್ದೆಗಳನ್ನೂ ಸೃಜಿಸಲಾಗಿರುತ್ತದೆ. ಆದುದರಿಂದ, ಕೋರ್ಟ್ ಮ್ಯಾನೇಜರ್ ಹುದ್ದೆಯ ಸಹಾಯಕ ಹುದ್ದೆಗಳಾದ ಶೀಘ್ರಲಿಪಿಗಾರರು, ಬೆರಳಚ್ಚುಗಾರರು ಮತ್ತು ಸೇವಕರ **ತಾತ್ಕಾಲಿಕ** ಹುದ್ದೆಗಳನ್ನು ಈ ಕೆಳಕಂಡ ಷರತ್ತು ಹಾಗೂ ನಿಬಂಧನೆಗಳಿಗೆ ಒಳಪಟ್ಟಂತೆ ನೇಮಕಾತಿ ಮಾಡಲು, ಅರ್ಹ ಅಭ್ಯರ್ಥಿಗಳಿಂದ ಈ ಅಧಿಸೂಚನೆಯ ಜೊತೆ ಲಗತ್ತಿಸಿರುವ ಅರ್ಜಿ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಸ್ವೀಕರಿಸಲು ಕಡೆಯ ದಿನಾಂಕ: 30.07.2012ರ ಅಪರಾಹ್ನ 5 ಗಂಟೆ.

1. **ಶೀಘ್ರಲಿಪಿಗಾರರು:**

ಖಾಲಿ ಹುದ್ದೆ – 01

ಮೂಲ ವೇತನ: ರೂ.7275/–, ಸಂಚಿತ ವೇತನ (Gross Salary) ರೂ.11,755/–.

ಹುದ್ದೆಯ ವರ್ಗೀಕರಣ:

ಮೀಸಲಾತಿ	ಇತರೆ	ಮಹಿಳೆ	ಗ್ರಾಮೀಣ	ಮಾ.ಸೈ	ಕ.ಮಾ.ಅ	ಯೊ.ನಿ.ಅ	ಅಂ.ಅ	ಒಟ್ಟು
ಪ.ಪಂಗಡ	–	01	–	–	–	–	–	01
ಒಟು	–	01	–	–	–	–	–	01

ವಿದ್ಯಾರ್ಹತೆ : ಎಸ್.ಎಸ್.ಎಲ್.ಸಿ., ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ರವರು ನಡೆಸುವ ಕನ್ನಡ ಮತ್ತು ಇಂಗ್ಲಿಷ್ ಎರಡೂ ಭಾಷೆಯಲ್ಲೂ ಹಿರಿಯ ಶ್ರೇಣಿ ಬೆರಳಚ್ಚು ಮತ್ತು ಶೀಘ್ರಲಿಪಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

ಆಯ್ಕೆಯ ವಿಧಾನ : ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ನಿಮಿಷ ಒಂದಕ್ಕೆ 120 ಪದಗಳ ದರದಲ್ಲಿ 5 ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು, ಉಕ್ತಲೇಖನವನ್ನು 45 ನಿಮಿಷಗಳಲ್ಲಿ ಅನುಲಿಪಿ ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿ : ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 5 ಅಂಕಗಳನ್ನೊಳಗೊಂಡಿರುತ್ತದೆ.

2. **ಬೆರಳಚ್ಚುಗಾರರು :**

ಖಾಲಿ ಹುದ್ದೆ – 01

ಮೂಲ ವೇತನ: ರೂ.5800/–, ಸಂಚಿತ ವೇತನ (Gross Salary) ರೂ.9,454/–

ಹುದ್ದೆಯ ವರ್ಗೀಕರಣ:

ಮೀಸಲಾತಿ	ಇತರೆ	ಮಹಿಳೆ	ಗ್ರಾಮೀಣ	ಮಾ.ಸೈ	ಕ.ಮಾ.ಅ	ಯೊ.ನಿ.ಅ	ಅಂ.ಅ	ಒಟ್ಟು
ಪ್ರವರ್ಗ–1	–	–	–	–	–	–	01	01
ಒಟ್ಟು	–	–	–	–	–	–	01	01

ವಿದ್ಯಾರ್ಹತೆ : ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆ ಮತ್ತು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಕನ್ನಡ ಮತ್ತು ಇಂಗ್ಲಿಷ್ ಎರಡೂ ಭಾಷೆಗಳಲ್ಲೂ ಹಿರಿಯ ಶ್ರೇಣಿ ಬೆರಳಚ್ಚು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

ಆಯ್ಕೆಯ ವಿಧಾನ : ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನದಲ್ಲಿ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿ : ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು, ಅದರಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಪಡೆಯಬೇಕು ಮತ್ತು ಸಂದರ್ಶನವು 5 ಅಂಕಗಳನ್ನೊಳಗೊಂಡಿರುತ್ತದೆ.

3. **ಸೇವಕರು:**

ಖಾಲಿ ಹುದ್ದೆ – 01.

ಮೂಲ ವೇತನ: ರೂ.4,800/–, ಒಟ್ಟು ವೇತನ (Gross Salary) ರೂ.7,784/–.

ಹುದ್ದೆಯ ವರ್ಗೀಕರಣ:

ಮೀಸಲಾತಿ	ಇತರೆ	ಮಹಿಳೆ	ಗ್ರಾಮೀಣ	ಮಾ.ಸೈ	ಕ.ಮಾ.ಅ	ಯೊ.ನಿ.ಅ	ಅಂ.ಅ	ಒಟ್ಟು
ಪ.ಜಾತಿ	–	01	–	–	–	–	–	01
ಒಟ್ಟು	–	01	–	–	–	–	–	01

ವಿದ್ಯಾರ್ಹತೆ : 7ನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಉತ್ತೀರ್ಣರಾಗಿರಬೇಕು.

ಆಯ್ಕೆಯ ವಿಧಾನ : ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ 01 ಹುದ್ದೆಗೆ 10 ಅಭ್ಯರ್ಥಿಗಳಂತೆ ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿ : ಸಂದರ್ಶನವು 10 ಅಂಕಗಳನ್ನೊಳಗೊಂಡಿರುತ್ತದೆ.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು ಹಾಗೂ ಅಂಗವಿಕಲ ಅಭ್ಯರ್ಥಿಗಳ ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಮೀಸಲಾದ ಹುದ್ದೆಗಳನ್ನು ಹೊರತುಪಡಿಸಿ ಇನ್ನುಳಿದ ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

ಅರ್ಹತಾ ಪರೀಕ್ಷೆಗೆ ಹಾಗೂ ಸಂದರ್ಶನಕ್ಕೆ ಆಯ್ಕೆಯಾಗುವ ಅಭ್ಯರ್ಥಿಗಳು ಮೈಸೂರು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

ವಯೋಮಿತಿ:

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು

ಅ. ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.

ಆ. ಗರಿಷ್ಠ ವಯೋಮಿತಿ

ಸಾಮಾನ್ಯ ವರ್ಗ	35 ವರ್ಷ
2ಎ, 2ಬಿ, 3ಎ, 3ಬಿ	38 ವರ್ಷ
ಪ.ಜಾತಿ, ಪ.ಪಂಗಡ, ಪ್ರವರ್ಗ – 1	40 ವರ್ಷ

ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯಸ್ಸನ್ನು ಮೀರಿರಕೂಡದು.

ವಯೋಮಿತಿ ಸಡಿಲಿಕೆ:

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.

1. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.
2. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.
3. ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು.
4. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೊ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೊ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.
5. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.
6. ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನ:

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ಪಡೆದು, ಅರ್ಜಿಗಳನ್ನು ಸಂಬಂಧಿತ ನೇಮಕಾತಿ ಪ್ರಾಧಿಕಾರದ ಮೂಲಕ ಕಳುಹಿಸಬೇಕು.

ಅರ್ಜಿ ಸಲ್ಲಿಸುವ ವಿಧಾನ:

ಈ ಪ್ರಕಟಣೆಯಲ್ಲಿ ಲಗತ್ತಿಸಿರುವ ಅರ್ಜಿ ನಮೂನೆಯನ್ನು ಬೆರಳಚ್ಚು ಮಾಡಿ / ಕಂಪ್ಯೂಟರ್ ಮೂಲಕ ತಯಾರಿಸಿ, **ಅರ್ಜಿಯನ್ನು ತಮ್ಮ ಸ್ವಂತ ಕೈಬರಹದಲ್ಲಿ ತಮಗೆ ಅನ್ವಯಿಸುವ ಎಲ್ಲಾ ಅಂಕಣಗಳನ್ನು ಭರ್ತಿ ಮಾಡುವುದು.** ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು

ಅರ್ಜಿಯ ಮೇಲೆ ಅಂಟಿಸಿ, ಅದರ ಮೇಲೂ ಸಹ ಸಹಿ ಮಾಡುವುದು ಹಾಗೂ ಅರ್ಜಿ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ ಮಾಡುವುದು. ಹುದ್ದೆಗೆ ಸಂಬಂಧಿಸಿದ ವಿದ್ಯಾರ್ಹತೆ, ವಯಸ್ಸು ಮತ್ತು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಅಧಿಕೃತ ಅಧಿಕಾರಿಗಳಿಂದ ಪಡೆದು, ಅವುಗಳ ನಕಲುಗಳನ್ನು ಸ್ವಯಂ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಅರ್ಜಿಯನ್ನು **"ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು – 570 005", ಇವರಿಗೆ ದಿನಾಂಕ: 30.07.2012ರ ಅಪರಾಹ್ನ 05.00 ಗಂಟೆಯೊಳಗೆ** ತಲುಪುವಂತೆ ಕಳುಹಿಸುವುದು. ಅರ್ಜಿಯನ್ನು ಕಳುಹಿಸುವ ಲಕೋಟೆ ಮೇಲೆ ಅಭ್ಯರ್ಥಿಯು ಯಾವ ಹುದ್ದೆಗೆ ಅರ್ಜಿಯನ್ನು ಸಲ್ಲಿಸುತ್ತಾನೆ ಎಂಬುದರ ಬಗ್ಗೆ ಹುದ್ದೆಯ ಹೆಸರನ್ನು ನಮೂದಿಸುವುದು.

ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲಾತಿಗಳು:

ಅಭ್ಯರ್ಥಿಗಳು ಈ ಕೆಳಕಂಡ ದಾಖಲಾತಿಗಳ **ಸ್ವಯಂ ದೃಢೀಕರಿಸಿದ** ಒಂದು ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು. ಸ್ವಯಂ ದೃಢೀಕರಣವಿಲ್ಲದ ಲಗತ್ತುಗಳನ್ನು ಪರಿಗಣಿಸಲಾಗುವುದಿಲ್ಲ.

1. ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ.
2. ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಎಸ್‌ಎಸ್‌ಎಲ್‌ಸಿ ಅಂಕ ಪಟ್ಟಿ / ಕ್ಯುಮುಲೇಟಿವ್ ರೆಕಾರ್ಡ್ / ಇನ್ನಾವುದೇ ಅಧಿಕೃತ ದಾಖಲಾತಿಗಳು.
3. ವಿದ್ಯಾರ್ಹತೆಯ ಬಗ್ಗೆ ಅಂಕಪಟ್ಟಿಗಳು.
4. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ, ಪ್ರವರ್ಗ–1ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು **2**ಎ, **2**ಬಿ, **3**ಎ ಮತ್ತು **3**ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್'ನಲ್ಲಿ ಸಂಬಂಧಿಸಿದ ತಹಸೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪಡೆದು ಸಲ್ಲಿಸಬೇಕು.
5. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿ:19.11.2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ:ಸಿಆಸುಇ/115/ಸೇನನಿ/2005ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸಬೇಕು.
6. ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರವನ್ನು ಸಲ್ಲಿಸುವುದು.
7. ವಿಧವೆಯರು, ಜೀತ ಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸುವುದು.
8. ಸ್ವಯಂ ವಿಳಾಸವಿರುವ ರೂ.5/– ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಅರ್ಜಿಯೊಂದಿಗೆ ಲಗತ್ತಿಸುವುದು.

ಷರತ್ತು ಮತ್ತು ನಿಬಂಧನೆಗಳು:

1. ಮೇಲ್ಕಂಡ ಹುದ್ದೆಗಳು ನೇಮಕಾತಿ ದಿನಾಂಕದಿಂದ 31.03.2015ರವರೆಗೆ ಮಾತ್ರ ಚಾಲ್ತಿಯಲ್ಲಿದ್ದು, ಗೌರವಾನ್ವಿತ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳ ಆದೇಶಾನುಸಾರ ಯಾವುದೇ ಸಂದರ್ಭದಲ್ಲಿಯಾದರೂ ನೇಮಕಾತಿಯನ್ನು ರದ್ದುಗೊಳಿಸಬಹುದಾಗಿರುತ್ತದೆ.
2. ಮೇಲ್ಕಂಡ ಹುದ್ದೆಗಳು ಪೂರ್ಣ ಕಾಲಿಕ(Full time)ಹುದ್ದೆಗಳಾಗಿದ್ದು, ಈ ಹುದ್ದೆಗಳಲ್ಲಿ ನೇಮಕಾತಿ ಹೊಂದಿದ ಅಭ್ಯರ್ಥಿಗಳು ತಮ್ಮ ನೇಮಕಾತಿ ಅವಧಿಯಲ್ಲಿ ಬೇರಾವುದೇ ಅರೆಕಾಲಿಕ ಅಥವಾ ಪೂರ್ಣ ಕಾಲಿಕ ಉದ್ಯೋಗಗಳಲ್ಲಿ ತೊಡಗುವಂತಿಲ್ಲ.
3. ಈ ಹುದ್ದೆಗಳು ಸಂಪೂರ್ಣವಾಗಿ **ತಾತ್ಕಾಲಿಕ** ಹುದ್ದೆಗಳಾಗಿದ್ದು, ಇದರ ಆಧಾರದ ಮೇಲೆ ಗೌರವಾನ್ವಿತ ಉಚ್ಚ ನ್ಯಾಯಾಲಯ ಅಥವಾ ಇನ್ನಾವುದೇ ಜಿಲ್ಲಾ ನ್ಯಾಯಾಂಗ ಘಟಕಗಳಲ್ಲಿ ಯಾವುದೇ ಹುದ್ದೆಯನ್ನು ಹೊಂದುವ ಅಥವಾ ಹುದ್ದೆಯನ್ನು ಖಾಯಂಗೊಳಿಸುವ ಹಕ್ಕನ್ನು ಈ ನೇಮಕಾತಿಯು ಅಭ್ಯರ್ಥಿಗಳಿಗೆ ನೀಡುವುದಿಲ್ಲ.
4. ಮೇಲ್ಕಂಡ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳ ಸ್ಥಳ ನಿಯೋಜನೆಯನ್ನು ಗೌರವಾನ್ವಿತ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳ ಆದೇಶದ ಮೇರೆಗೆ ಯಾವುದೇ ಸಮಯದಲ್ಲಾದರೂ, ಯಾವುದೇ ಜಿಲ್ಲಾ ನ್ಯಾಯಾಂಗ ಘಟಕಕ್ಕೆ ಬದಲಾಯಿಸಬಹುದಾಗಿರುತ್ತದೆ.

ವಿಶೇಷ ಸೂಚನೆ:

ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಲಗತ್ತಿಸಿರಬೇಕು ಇಲ್ಲವೇ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಕಡ್ಡಾಯವಾಗಿ ಸ್ವಯಂ ದೃಢೀಕರಿಸಿರಬೇಕು.

ಯಾವುದೇ ಅಭ್ಯರ್ಥಿಯು ಸರ್ಕಾರಿ/ಸರ್ಕಾರೇತರ ಅಧಿಕಾರಿಗಳಿಂದ ತನ್ನ ಅಭ್ಯರ್ಥಿತ್ವದ ಬಗ್ಗೆ ಪ್ರಭಾವ ಬೀರಿದರೆ ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

ಯಾವುದೇ ಅಭ್ಯರ್ಥಿಯು ಸಂದರ್ಶನದ ಬಗ್ಗೆ ಮಾಹಿತಿ ಬರದಿದ್ದರೆ, ಅವರು ಸಂದರ್ಶನಕ್ಕೆ ಅರ್ಹರಲ್ಲ ಎಂದು ತಿಳಿಯುವುದು ಮತ್ತು ಈ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ.

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ದಿನಾಂಕವು ಸಾರ್ವಜನಿಕ ರಜೆಯಾಗಿದ್ದರೆ ಮುಂದಿನ ಕಛೇರಿ ಕೆಲಸದ ದಿನ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ ಎಂದು ತಿಳಿಯುವುದು.

ಮೋಹನ್ ಶ್ರೀಪಾದ್ ಸಂಕೊಳ್ಳಿ
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು.

ಅರ್ಜಿ ನಮೂನೆ

ರವರಿಗೆ,
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮೈಸೂರು.

ಅಭ್ಯರ್ಥಿಯ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರದ ಮೇಲೆ ಸಹಿ ಮಾಡಿ ಅಂಟಿಸುವುದು.

ತಮ್ಮ ಕಛೇರಿಯ ಅಧಿಸೂಚನೆ ಸಂಖ್ಯೆ ಆಡಳಿತ/ಅ/8262/2012 ದಿನಾಂಕ: 30.06.2012 ಮೇರೆಗೆ ನಾನು .... ತಾತ್ಕಾಲಿಕ ಹುದ್ದೆಗೆ ಅರ್ಜಿಯನ್ನು ಸಲ್ಲಿಸುತ್ತಿದ್ದೇನೆ ಮತ್ತು ಈ ಕೆಳಕಂಡ ಮಾಹಿತಿಯನ್ನು ಒದಗಿಸುತ್ತಿದ್ದೇನೆ.

1	ಅಭ್ಯರ್ಥಿಯ ಹೆಸರು (ದಪ್ಪ ಅಕ್ಷರಗಳಲ್ಲಿ)			
2	ತಂದೆ / ಗಂಡನ ಹೆಸರು			
3	ತಾಯಿಯ ಹೆಸರು			
4	ಜನ್ಮ ದಿನಾಂಕ			
5	ವಯಸ್ಸು (ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಅಭ್ಯರ್ಥಿಯ ವಯಸ್ಸು)	ವರ್ಷಗಳು	ತಿಂಗಳುಗಳು	ದಿನಗಳು
6	ಲಿಂಗ	ಪುರುಷ	ಮಹಿಳೆ	
7	ರಾಷ್ಟ್ರೀಯತೆ			
8	ಧರ್ಮ ಮತ್ತು ಜಾತಿ			
9	ವೈವಾಹಿಕ ಸ್ಥಿತಿ	ವಿವಾಹಿತ	ಅವಿವಾಹಿತ	
10	ವಿವಾಹಿತರಾದಲ್ಲಿ ಒಬ್ಬರಿಗಿಂತ ಹೆಚ್ಚು ಜೀವಂತ ಗಂಡ ಅಥವಾ ಹೆಂಡತಿ ಇದ್ದಾರೆಯೇ?			
11	ನೀವು ಯಾವುದಾದರೂ ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿದ್ದೀರ?	ಹೌದು	ಇಲ್ಲ	
12	ನೀವು ಸರ್ಕಾರಿ ಸೇವೆಯಿಂದ ಅಥವಾ ಇನ್ನಾವುದಾದರು ಸೇವೆಯಿಂದ ವಜಾ ಆಗಿದ್ದೀರ ಅಥವಾ ತೆಗೆದುಹಾಕಲ್ಪಟ್ಟಿದ್ದೀರ?	ಹೌದು	ಇಲ್ಲ	

<table>
<tr><td rowspan="4">13</td><td rowspan="4">ಕೋರುವ ಮೀಸಲಾತಿಗಳು
(ಕೋರುವ ಮೀಸಲಾತಿಯನ್ನು ✔ ಚಿಹ್ನೆ ಹಾಕುವುದರ ಮೂಲಕ ಗುರುತಿಸಿ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗತ್ತಿಸಬೇಕು)</td><td>ಸಾಮಾನ್ಯ</td><td>ಪ.ಜಾತಿ</td><td>ಪ.ಪಂಗಡ</td><td>ಪ್ರವರ್ಗ–1</td></tr>
<tr><td></td><td></td><td></td><td></td></tr>
<tr><td>2ಎ</td><td>2ಬಿ</td><td>3ಎ</td><td>3ಬಿ</td></tr>
<tr><td></td><td></td><td></td><td></td></tr>
<tr><td rowspan="2">14</td><td rowspan="2">ನೀವು ಈ ಯಾವುದಾದರು ಮೀಸಲಾತಿ ಅಡಿಯಲ್ಲಿ ಬರುತ್ತೀರ?
(ಸೇರುವ ಮೀಸಲಾತಿಯನ್ನು ✔ ಚಿಹ್ನೆ ಹಾಕುವುದರ ಮೂಲಕ ಗುರುತಿಸಿ ಪ್ರಮಾಣ ಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗತ್ತಿಸಬೇಕು)</td><td>ಗ್ರಾಮೀಣ</td><td>ಕ.ಮಾ.ಅ</td><td>ಮಾ.ಸೈ</td><td>ಅಂ.ಅ</td><td>ಯೋ.ನಿ.ಅ.</td></tr>
<tr><td></td><td></td><td></td><td></td><td></td></tr>
<tr><td rowspan="10">15</td><td>ವಿದ್ಯಾರ್ಹತೆ:
(ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು)</td><td>ತೇರ್ಗಡೆಯಾದ ತಿಂಗಳು ಮತ್ತು ವರ್ಷ</td><td>ಗರಿಷ್ಠ ಅಂಕಗಳು</td><td>ಗಳಿಸಿದ ಅಂಕಗಳು</td></tr>
<tr><td>7ನೇ ತರಗತಿ</td><td></td><td></td><td></td></tr>
<tr><td>ಎಸ್. ಎಸ್. ಎಲ್. ಸಿ.</td><td></td><td></td><td></td></tr>
<tr><td>ಕನ್ನಡ ಬೆರಳಚ್ಚು (ಕಿರಿಯ ಶ್ರೇಣಿ)</td><td></td><td></td><td></td></tr>
<tr><td>ಆಂಗ್ಲ ಬೆರಳಚ್ಚು (ಕಿರಿಯ ಶ್ರೇಣಿ)</td><td></td><td></td><td></td></tr>
<tr><td>ಕನ್ನಡ ಬೆರಳಚ್ಚು (ಹಿರಿಯ ಶ್ರೇಣಿ)</td><td></td><td></td><td></td></tr>
<tr><td>ಆಂಗ್ಲ ಬೆರಳಚ್ಚು (ಹಿರಿಯ ಶ್ರೇಣಿ)</td><td></td><td></td><td></td></tr>
<tr><td>ಕನ್ನಡ ಶೀಘ್ರಲಿಪಿ (ಹಿರಿಯ ಶ್ರೇಣಿ)</td><td></td><td></td><td></td></tr>
<tr><td>ಆಂಗ್ಲ ಶೀಘ್ರಲಿಪಿ (ಹಿರಿಯ ಶ್ರೇಣಿ)</td><td></td><td></td><td></td></tr>
<tr><td>ಇತರೆ ಯಾವುದೇ ವಿದ್ಯಾರ್ಹತೆ
(ಸೂಚನೆ: ಅನ್ವಯಿಸುವ ವಿದ್ಯಾರ್ಹತೆಯ ಅಂಕಣಗಳನ್ನು ಮಾತ್ರ ಭರ್ತಿ ಮಾಡುವುದು)</td><td colspan="3"></td></tr>
<tr><td rowspan="2">16</td><td rowspan="2">ನೀವು ಪ್ರಸ್ತುತ ಸರ್ಕಾರಿ ಸೇವೆಯಲ್ಲಿರುವಿರ?
(ಸರ್ಕಾರಿ ಸೇವೆಯಲ್ಲಿದ್ದಲ್ಲಿ ನೇಮಕಾತಿ ಪ್ರಾಧಿಕಾರದಿಂದ ಪಡೆದ ನಿರಾಕ್ಷೇಪಣ ಪತ್ರದ ನಕಲನ್ನು ಲಗತ್ತಿಸಬೇಕು)</td><td>ಹೌದು</td><td>ಇಲ್ಲ</td></tr>
<tr><td></td><td></td></tr>
<tr><td>17</td><td>ಅಭ್ಯರ್ಥಿಯ ಖಾಯಂ ವಿಳಾಸ ಮತ್ತು ದೂರವಾಣಿ ಸಂಖ್ಯೆ</td><td></td></tr>
<tr><td>18</td><td>ಅಭ್ಯರ್ಥಿಯ ಅಂಚೆ ವಿಳಾಸ ಮತ್ತು ದೂರವಾಣಿ ಸಂಖ್ಯೆ</td><td></td></tr>
<tr><td>19</td><td>ನಿಮ್ಮ ಸ್ವವಿಳಾಸವಿರುವ ರೂ.5/–ರ ಅಂಚೆ ಚೀಟಿ ಅಂಟಿಸಿರುವ ಲಕೋಟೆಯನ್ನು ಲಗತ್ತಿಸಿದ್ದೀರ?</td><td></td></tr>
</table>

ಈ ಮೇಲ್ಕಂಡ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತೇನೆ ಹಾಗೂ ಒಂದು ವೇಳೆ ಮೇಲ್ಕಂಡ ಮಾಹಿತಿಗಳು ತಪ್ಪು ಎಂದು ಕಂಡು ಬಂದಲ್ಲಿ ನನ್ನ ಅಭ್ಯರ್ಥಿತ್ವವನ್ನು ರದ್ದುಪಡಿಸಬಹುದೆಂದು ಘೋಷಿಸುತ್ತೇನೆ.

ಸ್ಥಳ :

ಅಭ್ಯರ್ಥಿಯ ಸಹಿ

ದಿನಾಂಕ :

ಪಿ.ಆರ್. 110

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಗ್ರಾಮಲೆಕ್ಕಿಗರ ನೇರನೇಮಕಾತಿ ಆಯ್ಕೆ ಪ್ರಾಧಿಕಾರ, ಕೋಲಾರ ಜಿಲ್ಲೆ, ಕೋಲಾರ

ನಂ. ಸಿಬ್ಬಂದಿ(2) ಸಿಆರ್:15/2012–13, ದಿನಾಂಕ 09/07/2012

ಈ ಕಛೇರಿಯಿಂದ ಹೊರಡಿಸಿದ ಇದೇ ಸಮಸಂಖ್ಯೆಯ ಅಧಿಸೂಚನೆ ದಿನಾಂಕ 29/6/2012ಕ್ಕೆ ಈ ಕೆಳಕಂಡ **ತಿದ್ದುಪಡಿ ಹಾಗೂ ಸೇರ್ಪಡೆ** ಗಳನ್ನು ಮಾಡಲಾಗಿದೆ.

ತಿದ್ದುಪಡಿ

ಈ ಕಛೇರಿಯ ಸಮಸಂಖ್ಯೆ ಅಧಿಸೂಚನೆ ದಿನಾಂಕ 29/6/2012 ರ ಪುಟ ಸಂಖ್ಯೆ –7 ರ ಖಂಡಿಕೆ–15 ರ ಬದಲಿಗೆ ಈ ಕೆಳಕಂಡಂತೆ ತಿದ್ದುಪಡಿ ಮಾಡಿರುವುದನ್ನು ಓದಿಕೊಳ್ಳತಕ್ಕದ್ದು.

ಖಂಡಿಕೆ–15: ಅಂಗವಿಕಲ ಅಭ್ಯರ್ಥಿಗಳು:

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 9(1ಎ) ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್–ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇ. 5 ರ ಸಮತಲ ಮೀಸಲಾತಿ ಕಲ್ಪಿಸಲಾಗಿದೆ.

ಸರ್ಕಾರದ ಸುತ್ತೋಲೆ ಸಂಖ್ಯೆ ಕಂಇ 100 ಬಿಎಸ್‌ಸಿ 2011 ದಿನಾಂಕ 29/6/2012 ರಲ್ಲಿ ತಿಳಿಸಿರುವಂತೆ ಕಂದಾಯ ಇಲಾಖೆಯ ಗ್ರಾಮಲೆಕ್ಕಿಗರ ಹುದ್ದೆಗಳಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್. 52. ಎಸ್‌ಆರ್‌ಆರ್ 99 ದಿನಾಂಕ 29/11/2002 ರಲ್ಲಿನ ಅನುಸೂಚಿ ಪಟ್ಟಿ ಕ್ರಮಸಂಖ್ಯೆ 76 ರಲ್ಲಿ ಮೀಸಲಿರಿಸಿರುವ ಅಂಗವಿಕಲತೆಯನ್ನು ಮಾರ್ಪಡಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 54 ಎಸ್‌ಆರ್‌ಆರ್ 2012 ದಿನಾಂಕ 23/6/2012 ರಲ್ಲಿನ ತಿದ್ದುಪಡಿಯಂತೆ ಗ್ರಾಮಲೆಕ್ಕಿಗರ ಹುದ್ದೆಗಳಿಗೆ ಮೀಸಲಿರಿಸಿರುವ ಅಂಗವಿಕಲತೆಯನ್ನು ಈ ಕೆಳಕಂಡಂತೆ ಮಾರ್ಪಡಿಸಲಾಗಿದೆ.

ಕುಷ್ಟರೋಗದಿಂದ ಗುಣಮುಖರಾದವರು (Leprocy cured) ಶ್ರವಣದೋಷ ಉಳ್ಳವರು (Hearing impaired) ದೈಹಿಕ ಅಂಗವಿಕಲರು (Locomotor Disability) ಮತ್ತು ಮಾನಸಿಕ ಅಸ್ವಸ್ಥತೆ (Mentalli ill) ಈ ಅಂಗವಿಕಲತೆ ಉಳ್ಳವರನ್ನು ಪರಿಗಣಿಸಲಾಗುವುದು.

ಸೇರ್ಪಡೆ

ಈ ಕಛೇರಿ ಅಧಿಸೂಚನೆ ಸಮಸಂಖ್ಯೆ ದಿನಾಂಕ 29/6/2012 ರ ಪುಟ (3) ರಲ್ಲಿನ ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು – ಕಂಡಿಕೆಯಲ್ಲಿ ಈ ಕೆಳಕಂಡ ಹೆಚ್ಚುವರಿ ಸೂಚನೆಯನ್ನು ಸೇರ್ಪಡೆ ಮಾಡಿದೆ.

ಅರ್ಜಿದಾರರು ಕಂಪ್ಯೂಟರ್‌ನಲ್ಲಿ ಮುದ್ರಿಸಿದ ಚಲನ್‌ನಂತೆ ಎಸ್.ಬಿ.ಎಂ. ನಲ್ಲಿ ಅರ್ಜಿ ಶುಲ್ಕ ಪಾವತಿಸಿದ ನಂತರ ಪಾವತಿ ಮಾಡಿದ ಚಲನ್‌ನ ಕೌಂಟರ್‌ಫೈಲ್‌ನ್ನು ಸ್ಕ್ಯಾನ್ ಮಾಡಿ ಇದೇ ವೆಬ್‌ಸೈಟ್‌ನಲ್ಲಿ ಚಲನ್ ಸಂಖ್ಯೆ, ದಿನಾಂಕಗಳೊಂದಿಗೆ ಅಪ್‌ಲೋಡ್ ಮಾಡುವುದು, ಶುಲ್ಕ ಪಾವತಿಸಿದ ವಿವರಗಳನ್ನು ಅಪ್‌ಲೋಡ್ ಮಾಡಲು ದಿನಾಂಕ 10–08–2012 ಸಂಜೆ 5–30 ರವರೆಗೆ ಸಮಯಾವಕಾಶವನ್ನು ನೀಡಲಾಗಿರುತ್ತದೆ. ಸ್ವೀಕೃತಿ ಸ್ಲಿಪ್ ಮತ್ತು ಚಲನ್ ಪಾವತಿಯ ಒಂದು ಪ್ರತಿಯನ್ನು ತಮ್ಮಲ್ಲಿ ಇರಿಸಿಕೊಂಡು ಈ ದಾಖಲೆಗಳನ್ನು ನಿಗದಿತ ದಿನಾಂಕದಂದು ಈ ಕಛೇರಿಗೆ ಪರಿಶೀಲನೆಗಾಗಿ ಹಾಜರುಪಡಿಸತಕ್ಕದ್ದು.

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು
ಗ್ರಾಮಲೆಕ್ಕಿಗರ ಆಯ್ಕೆ ಪ್ರಾಧಿಕಾರ

ಪಿ.ಆರ್. 107

ಜಿಲ್ಲಾಧಿಕಾರಿಯವರ ಕಚೇರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು

ಅಧಿಸೂಚನೆ

ಇಎಸ್ ಟಿ (2)ಸಿಆರ್. 54/2012-13/82804/ಜೆ3, ದಿನಾಂಕ : 16-07-2012

ಕರ್ನಾಟಕ ಸರ್ಕಾರದ ಕಂದಾಯ ಇಲಾಖೆಯ ದಕ್ಷಿಣ ಕನ್ನಡ ಜಿಲ್ಲಾ ಘಟಕದಲ್ಲಿ ಬರುವ ತಾಲೂಕುಗಳಲ್ಲಿ ಖಾಲಿ ಗ್ರಾಮಲೆಕ್ಕಿಗರ ಹುದ್ದೆಗಳನ್ನು ಕರ್ನಾಟಕ ಸಾಮಾನ್ಯ ಸೇವೆಗಳು (ರೆವೆನ್ಯೂ ಸಬೋರ್ಡಿನೇಟ್ ಬ್ರಾಂಚ್) (ಕೇಡರ್ ಎಂಡ್ ರಿಕ್ರ್ಯೂಟ್ ಮೆಂಟ್) (ತಿದ್ದುಪಡಿ) ನಿಯಮಗಳು 2008 ಮತ್ತು 2009ರನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರ ತಮ್ಮ ಪತ್ರ ಸಂಖ್ಯೆ: ಕಂಇ 33 ಡಿಎಸ್ ಪಿ 2012 ದಿನಾಂಕ 05-06-2012 ರಲ್ಲಿ ಅನುಮೋದನೆ ನೀಡಿದೆ. ಅದರಂತೆ ಗ್ರಾಮಲೆಕ್ಕಿಗರ ಖಾಲಿ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗದಿಪಡಿಸಿದ ನಮೂನೆಯಲ್ಲಿ ಅರ್ಜಿಗಳನ್ನು ಆನ್ ಲೈನ್ ಮೂಲಕ ಆಹ್ವಾನಿಸಲಾಗಿದೆ.

ಗ್ರಾಮಲೆಕ್ಕಿಗರ ಖಾಲಿ ಇರುವ ಹುದ್ದೆಗಳ ವಿವರಗಳು ಈ ಕೆಳಗಿನಂತಿವೆ:

ಹುದ್ದೆಗಳ ವರ್ಗೀಕರಣ::

ಖಾಲಿ ಹುದ್ದೆಗಳು (ರೋಸ್ಟರ್ ಬಿಂದು 42 ರಿಂದ 79 ರ ವರೆಗೆ)									
ಕ್ರ. ಸಂ	ವರ್ಗೀಕರಣದ ವಿವರ	ಸಾಮಾನ್ಯ ಅಭ್ಯರ್ಥಿ	ಮಹಿಳಾ ಅಭ್ಯರ್ಥಿ	ಗ್ರಾಮೀಣ ಅಭ್ಯರ್ಥಿ	ಅಂಗವಿಕಲ ಅಭ್ಯರ್ಥಿ	ಮಾಜಿ ಸೈನಿಕರು	ಕನ್ನಡ ಮಾಧ್ಯಮ ಅಭ್ಯರ್ಥಿ	ಯೋಜನಾ ನಿರಾಶ್ರಿತರು	ಒಟ್ಟು
1	ಸಾಮಾನ್ಯ ಅರ್ಹತೆ	4	6	5	1	1	1	1	19
2	ಪರಿಶಿಷ್ಟ ಜಾತಿ	1	1	2	1	-	-	-	5
3	ಪರಿಶಿಷ್ಟ ಪಂಗಡ	-	-	1	-	-	-	-	1
4	ಪ್ರವರ್ಗ- I	1	1	-	-	-	-	-	2
5	ಪ್ರವರ್ಗ- IIA	1	2	2	1	-	-	-	6
6	ಪ್ರವರ್ಗ- II B	1	-	-	-	-	-	-	1
7	ಪ್ರವರ್ಗ- IIIA	1	-	1	-	-	-	-	2
8	ಪ್ರವರ್ಗ- III B	1	1	-	-	-	-	-	2
	ಒಟ್ಟು ಜುಮ್ಲಾ	10	11	11	3	1	1	1	38

1. ಅರ್ಜಿ ಸಲ್ಲಿಸುವ ವಿಧಾನ:- ಅರ್ಜಿಗಳನ್ನು ಆನ್–ಲೈನ್ (Online) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದಾಗಿದೆ. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ.

2. ಅರ್ಜಿ ಶುಲ್ಕ:-

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಾಗೂ ಪ್ರವರ್ಗ-1	ರೂ. 50=00
ಸಾಮಾನ್ಯ ವರ್ಗ, 2ಎ, 2ಬಿ, 3ಎ, 3ಬಿ ವರ್ಗಕ್ಕೆ	ರೂ.200=00

3. ಆನ್-ಲೈನ್ (Online) ಮುಖಾಂತರ ಅರ್ಜಿ ಸಲ್ಲಿಸುವ ವಿಧಾನ:- ಅಭ್ಯರ್ಥಿಯು ಇಲಾಖೆಯ ಅಧಿಕೃತ ವೆಬ್ ಸೈಟ್ dk-va.kar.nic.in ತೆರೆದು ಕಂಪ್ಯೂಟರ್ ಪರದೆಯ ಮೇಲೆ ಅರ್ಜಿಯನ್ನು ತುಂಬಬೇಕು. ಅಭ್ಯರ್ಥಿಯು Submit Button ಅನ್ನು ಒತ್ತಿದರೆ ಅರ್ಜಿ ಸಂಖ್ಯೆ (Reference Number) ಸೃಷ್ಟಿಯಾಗುತ್ತದೆ. ಆನ್-ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಸ್ವೀಕೃತಿ ಪತ್ರ (Acknowledgement slip) ಮತ್ತು ದ್ವಿಪ್ರತಿ ಚಲನ್ ನ್ನು ತೆಗೆದುಕೊಳ್ಳತಕ್ಕದ್ದು. ಈ ಚಲನ್ ನ್ನು ಅರ್ಜಿ ಶುಲ್ಕದೊಂದಿಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಅಥವಾ ಕಾರ್ಪೋರೇಶನ್ ಬ್ಯಾಂಕ್‌ನ ಕರ್ನಾಟಕದಲ್ಲಿ ಯಾವುದಾದರೂ ಶಾಖೆಯಲ್ಲಿ ಪಾವತಿಸಬೇಕು. ಅಭ್ಯರ್ಥಿಗಳು ಸ್ವೀಕೃತಿ ಸ್ಲಿಪ್ ನ್ನು ಮತ್ತು ಚಲನ್ ಪಾವತಿಯ ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು. . ಇನ್ನೊಂದು ಚಲನ್ ಪ್ರತಿ ಬ್ಯಾಂಕ್ ಬಳಿ ಇರುತ್ತದೆ. ಈ ದಾಖಲೆಗಳನ್ನು ಪರಿಶೀಲನೆಗೆ ನಿಗಧಿಪಡಿಸಿದ ದಿನಾಂಕದಂದು 28-08-2012 ಹಾಜರುಪಡಿಸತಕ್ಕದ್ದು. ಬ್ಯಾಂಕಿನಲ್ಲಿ ನಿಗಧಿತ ಅರ್ಜಿ ಶುಲ್ಕ ಪಾವತಿಸಲು ಕೊನೆಯ ದಿನಾಂಕ: 14-08-2012 ರಂದೇ ಆಗಿರುತ್ತದೆ. ಶುಲ್ಕ ಪಾವತಿಸುವ ಚಲನ್ ಅನ್ನು ಅಂತಿಮ ದಿನಾಂಕವಾದ 14-08-2012 ರಂದು ಸಂಜೆ 5.30 ಒಳಗಾಗಿಯೇ ಅಪ್ಲೋಡ್ ಮಾಡಬೇಕು. ನಿಗಧಿತ ಅರ್ಜಿ ಶುಲ್ಕ ಹೊರತುಪಡಿಸಿ ಯಾವುದೇ ವಿಧವಾದ ಬ್ಯಾಂಕ್ ಶುಲ್ಕ ಇತ್ಯಾದಿ ಪಾವತಿಸುವ ಅವಶ್ಯಕತೆ ಇರುವುದಿಲ್ಲ. ಡಿ.ಡಿ,, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಅಲ್ಲದೆ ಒಮ್ಮೆ ಅರ್ಜಿ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರ ಯಾವುದೇ ನೇಮಕಾತಿಗಳಿಗೆ

ಹೊಂದಿಸಿಕೊಳ್ಳಲಾಗುವುದಿಲ್ಲ. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ವರೆಗೂ ವಿಳಂಬ ಮಾಡದೆ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

ಅರ್ಜಿ ಮತ್ತು ಅರ್ಜಿ ಶುಲ್ಕ ಪಾವತಿ ವಸ್ತು ಸ್ಥಿತಿಯ ಬಗ್ಗೆ ಅಭ್ಯರ್ಥಿಗಳು ಆನ್ ಲೈನ್ ನಲ್ಲಿ ಪರಿಶೀಲಿಸಿ Application Status ಖಚಿತಪಡಿಸಿಕೊಳ್ಳುವುದು.

4. ಅರ್ಹತಾ ಷರತ್ತುಗಳು:

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಗಳು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ/ಮಾನಸಿಕ ನ್ಯೂನತೆಯಿಂದ ಮುಕ್ತರಾಗಿರತಕ್ಕದ್ದು.

5.ಶೈಕ್ಷಣಿಕ ವಿದ್ಯಾರ್ಹತೆ:

ಪಿ.ಯು.ಸಿ. ಪರೀಕ್ಷೆ ಅಥವಾ **CBSE** ಅಥವಾ **ICSE** ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. ವೃತ್ತಿಪರ ಕೋರ್ಸುಗಳನ್ನು ಮಾಡಿರುವ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.

6. ವೇತನ ಶ್ರೇಣಿ :

ರೂ.11600-200-12000-250-13000-300-14500-350-15600-400-17200-450-19000-500-21000

7. ವಯೋಮಿತಿ: : ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವಾದ 14-08-2012 ರಂದು

ಈ ಕೆಳಗಿನಂತೆ ವಯೋಮಿತಿ ಹೊಂದಿರತಕ್ಕದ್ದು.

ವರ್ಗಗಳು	ಕನಿಷ್ಟ	ಗರಿಷ್ಟ
ಪರಿಶಿಷ್ಟ ಜಾತಿ/.ಪರಿಶಿಷ್ಟ ಪಂಗಡ/ಪ್ರ ವರ್ಗ-1	18	40
2ಎ, 2ಬಿ, 3ಎ, 3ಬಿ	18	38
ಸಾಮಾನ್ಯ ವರ್ಗ	18	35

ಎಸ್.ಎಸ್.ಎಲ್.ಸಿ. ಅಥವಾ ವರ್ಗಾವಣೆ ಪ್ರಮಾಣ ಪತ್ರ (ಟಿಸಿ) ಅಥವಾ ಕ್ಯುಮುಲೇಟಿವ್ ರೆಕಾರ್ಡ್ ನಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಮಾತ್ರ ಆಯ್ಕೆ ಪ್ರಾಧಿಕಾರದಿಂದ ಪರಿಗಣಿಸಲಾಗುವುದು. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ. ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) 1977ರ ನಿಯಮಾವಳಿಗಳ ನಿಯಮ 6ರಂತೆ ವಯೋಮಿತಿಯನ್ನು ಅದರಲ್ಲಿ ತಿಳಿಸಿರುವ ಮಟ್ಟಿಗೆ ಸಂಬಂಧಪಟ್ಟ ದಾಖಲೆ ಒದಗಿಸಿದಲ್ಲಿ ಹೆಚ್ಚಿಸುವ ಬಗ್ಗೆ ಪರಿಶೀಲಿಸಲಾಗುವುದು. ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ನಿಯಮ 6 ರಂತೆ ಗರಿಷ್ಟ ವಯೋಮಿತಿಯನ್ನು ಈ ಮುಂದಿನ ಪ್ರಕರಣಗಳಲ್ಲಿ ಮುಂದೆ ಹೇಳಿರುವಷ್ಟರ ಮಟ್ಟಿಗೆ ಹೆಚ್ಚಿಸಲು ಅವಕಾಶವಿದೆ.

(ಎ) ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪಿಸಲಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಅಡಿಯಲ್ಲಿನ ಸರ್ಕಾರದಿಂದ ಸ್ಥಾಪಿತವಾಗಿದ್ದು ಮತ್ತು ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ನಿಗಮದ ಅಡಿಯಲ್ಲಿ ಹುದ್ದೆಯನ್ನು ಧಾರಣ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಆತ ಅಂಥ ಹುದ್ದೆಯನ್ನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ಅಥವಾ ಹತ್ತು ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು;.

(ಬಿ) ಮಾಜಿ ಸೈನಿಕನಾಗಿರುವ, ಅಭ್ಯರ್ಥಿಯ ಸಂದರ್ಭದಲ್ಲಿ ಮೂರು ವರ್ಷಗಳು ಮತ್ತು ಇದಕ್ಕೆ ಕೇಂದ್ರದ ಸಶಸ್ತ್ರ ಪಡೆಗಳಲ್ಲಿ ಅವನು ಸೇವೆ ಸಲ್ಲಿಸಿರುವಷ್ಟು ವರ್ಷಗಳನ್ನು ಸೇರಿಸಬೇಕು.

(ಸಿ) ಪೂರ್ಣಾವಧಿ ಕೆಡೆಟ್ ಇನ್ ಸ್ಟ್ರಕ್ಟರ್ ಆಗಿ ಸೇವೆ ಸಲ್ಲಿಸಿದ ತರುವಾಯ, ರಾಷ್ಟ್ರೀಯ ಕೆಡೆಟ್ ದಳದಿಂದ ಬಿಡುಗಡೆ ಮಾಡಿದ ಅಭ್ಯರ್ಥಿಯ ಸಂದರ್ಭದಲ್ಲಿ, ಹಾಗೆ ಕೆಡೆಟ್ ಇನ್ ಸ್ಟ್ರಕ್ಟರಾಗಿ ಆತನು ಸೇವೆ ಸಲ್ಲಿಸಿರುವಷ್ಟು ವರ್ಷಗಳು.

(ಡಿ) ರಾಜ್ಯ ಸರ್ಕಾರ ಪ್ರಾಯೋಜಿತ ಗ್ರಾಮೀಣ ಕೈಗಾರೀಕರಣ ಯೋಜನೆಯಲ್ಲಿ ನೇಮಕಗೊಂಡ ಗ್ರಾಮ ಸಮೂಹ ಇನ್ಸ್ ಪೆಕ್ಟರ್ ಆಗಿರುವ ಅಥವಾ ಆಗಿದ್ದಂಥ ಅಭ್ಯರ್ಥಿಯ ಸಂದರ್ಭದಲ್ಲಿ ಅಂಥ ಗ್ರಾಮ ಸಮೂಹ ಇನ್ಸ್ ಪೆಕ್ಟರಾಗಿ ಆತ ಸೇವೆ ಸಲ್ಲಿಸಿರುವಷ್ಟು ವರ್ಷಗಳು.

(ಇ) ಅಂಗವಿಕಲನಾಗಿರುವ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು.

(ಎಫ್) ಈ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಹುದ್ದೆಯನ್ನು ಧಾರಣೆ ಮಾಡಿರುವ ಅಥವಾ ಧಾರಣ ಮಾಡಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಅಂಥ ಹುದ್ದೆಯನ್ನು ಆತನು ಧಾರಣೆ ಮಾಡಿರುವಷ್ಟು ಅಥವಾ ಧಾರಣೆ ಮಾಡಿದ್ದಷ್ಟು ವರ್ಷಗಳು ಅಥವಾ ಐದು ವರ್ಷಗಳು ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು;

(ಜಿ) ಅಭ್ಯರ್ಥಿ ವಿಧವೆಯಾಗಿರುವಾಗ , ಹತ್ತು ವರ್ಷಗಳು;

(ಹೆಚ್) ಜೀತ ಕಾರ್ಮಿಕನಾಗಿದ್ದ ಅಭ್ಯರ್ಥಿಯ ಸಂದರ್ಭದಲ್ಲಿ ಹತ್ತು ವರ್ಷಗಳು

8. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು:

1. ಜಾತಿ ಮೀಸಲಾತಿ ಕೋರಬಯಸುವ :
   1. ಪ.ಜಾ/ಪ.ಪಂ. ಅಭ್ಯರ್ಥಿಗಳು ನಮೂನೆ `ಡಿ` ರಲ್ಲಿ
   2. ಪ್ರವರ್ಗ-1 ರ ಅಭ್ಯರ್ಥಿಗಳು ನಮೂನೆ `ಇ` ನಲ್ಲಿ

2. 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ `ಎಫ್ `ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು. ಈ ಪ್ರಮಾಣ ಪತ್ರಗಳು ಈ ಹುದ್ದೆಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ (14-08-2012) ದೊಳಗೆ ಅರ್ಹತೆಯನ್ನು ಪಡೆದಿರಬೇಕು.

3. ಜಾತಿ ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿ, (ಅಧ್ಯಕ್ಷರು, ಜಾತಿ ಆದಾಯ ಪರಿಶೀಲನಾ ಸಮಿತಿ)ಯವರಿಂದ ಸಿಂಧುತ್ವ ಪ್ರಮಾಣ ಪತ್ರ ಹಾಜರುಪಡಿಸುವ ಹೊತ್ತಿಗೆ ಒಳಪಟ್ಟಿರುತ್ತದೆ.

9. ಗ್ರಾಮೀಣ ಅಭ್ಯರ್ಥಿ:

1. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1 ರಿಂದ 10ನೇ ತರಗತಿಯ ವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರಬೇಕು.

2. ಗ್ರಾಮೀಣ ಮೀಸಲಾತಿಯನ್ನು ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ , ಪ್ರವರ್ಗ-1, 2ಎ, 2ಬಿ, 3ಎ, 3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ನಮೂನೆ 2ರಲ್ಲಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರತಕ್ಕದ್ದು.

3. ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ-2ರ ಮೀಸಲಾತಿ ಪ್ರಮಾಣ ಪತ್ರದ ಜೊತೆಗೆ ನಮೂನೆ-1ರಲ್ಲಿ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪರಿಶೀಲನಾ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ತಹಶೀಲ್ದಾರರಿಂದ ಪಡೆದಿಟ್ಟುಕೊಂಡಿರತಕ್ಕದ್ದು.

ಸೂಚನೆ: ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ನಮೂನೆ - 2 ರಲ್ಲಿಯ ಪ್ರಮಾಣ ಪತ್ರವನ್ನು ಅಭ್ಯರ್ಥಿಗಳು ತಾವು ವ್ಯಾಸಂಗ ಮಾಡಿ ದ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಪಡೆದಿರತಕ್ಕದ್ದು

10. ಕನ್ನಡ ಮಾಧ್ಯಮ ಅಭ್ಯರ್ಥಿ:

ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಮೊಹರಿನೊಂದಿಗೆ ಪ್ರಮಾಣ ಪತ್ರವನ್ನು ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಪಡೆದಿರತಕ್ಕದ್ದು.

11. ಯೋಜನಾ ನಿರಾಶ್ರಿ ತ ಅಭ್ಯರ್ಥಿ:

ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕೋರುವ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರ್ ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಪಡೆದುಕೊಂಡಿರತಕ್ಕದ್ದು.

12. ಅಂಗವಿಕಲರ ಮೀಸಲಾತಿ ಬಗ್ಗೆ:

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ನಿಯಮ 9 (1 - ಎ) ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್ ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇಕಡಾ 5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ 128 ಸೇನೆನಿ 2006 ದಿನಾಂಕ 1-8-2009 ರಂತೆ ಮೀಸಲಾತಿ ನೀಡಲಾಗುವುದು. ಸರಕಾರದ ಅಧಿಸೂಚನೆ ಸಂ.DPAR 54 SSR 2012 ದಿ:23-06-2012 ರೀತ್ಯಾ ಗ್ರಾಮಲೆಕ್ಕಿಗರ ಹುದ್ದೆಗಳಲ್ಲಿ ಅಂಗವಿಕಲರ ಮೀಸಲಾತಿಯನ್ನು ಈ ಕೆಳಕಂಡ ವರ್ಗಗಳಿಗೆ ಮಾತ್ರ ಕಲ್ಪಿಸಲಾಗಿದೆ.

1. ಕುಷ್ಠ ರೋಗದಿಂದ ಗುಣಮುಖರಾದವರು **(Leprosy cured)** 2. ಶ್ರವಣ ದೋಷವುಳ್ಳವರು **(Hearing impaired)** 3. ಮಾನಸಿಕ ಅಸ್ವಸ್ಥತೆ **(Mentally ill)** 4. ಚಲನ ವಲನ ವೈಕಲ್ಯತೆ **(Loco motor Disability)** ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 128 ಸೇನೆನಿ 2005, ದಿನಾಂಕ 19/11/2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದು ಕೊಂಡಿರತಕ್ಕದ್ದು. ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲು ಬರುವುದಿಲ್ಲ.

*ಸೂಚನೆ: ಈ ಮೇಲಿನ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ **14-08-2012**ರೊಳಗೆ ಅರ್ಹತೆಯನ್ನು ಪಡೆದಿರಬೇಕು. ತಾತ್ಕಾಲಿಕ ಪರಿಶೀಲನಾ ಪಟ್ಟಿಯಲ್ಲಿ ಪ್ರಕಟಗೊಂಡ ಅಭ್ಯರ್ಥಿಗಳು ಮಾತ್ರ ನಿಗಧಿತ ದಿನಾಂಕ : **(28-08-2012)** ರಂದು ಪೂರ್ವಾಹ್ನ **9.00** ಗಂಟೆಗೆ ನೇಮಕಾತಿ ಪ್ರಾಧಿಕಾರದ ಎದುರು (ದಕ್ಷಿಣ ಕನ್ನಡ ಜಿಲ್ಲಾಧಿಕಾರಿಯವರ ಕಚೇರಿ 2ನೇ ಮಹಡಿ ಸಭಾಂಗಣ) ಮೂಲ ಪ್ರಮಾಣ ಪತ್ರಗಳನ್ನು ತಪ್ಪದೆ ಹಾಜರುಪ ಡಿಸತಕ್ಕದ್ದು .*

***13.* ಆಯ್ಕೆ ವಿಧಾನ::**

ಕರ್ನಾಟಕ ಜನರಲ್ ಸರ್ವೀಸಸ್ **(Revenue Subordinate Branch) (Cadre & Recruitment)** (ತಿದ್ದುಪಡಿ) ನಿಯಮಗಳು 2008 ಮತ್ತು 2009 ಹಾಗೂ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ಪ್ರಕಾರ ಅಭ್ಯರ್ಥಿಯನ್ನು ಅವರು ಪಿ.ಯು.ಸಿ. ಪರೀಕ್ಷೆ ಅಥವಾ CBSE ಅಥವಾ ICSE ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ **(on merit)** ಆಧಾರದ ಮೇಲೆ ಆಯಾಯ ಮೀಸಲಾತಿ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುವುದು. ನಿಯಮಾವಳಿಯಂತೆ ತಾತ್ಕಾಲಿಕ ಪರಿಶೀಲನಾ ಪಟ್ಟಿಯನ್ನು ದಿನಾಂಕ: 22-08-2012 ರಂದು ಪ್ರಕಟಿಸಲಾಗುವುದು.

1 ಪ್ರಮುಖ ಸೂಚನೆಗಳು: :

ಈ ಕೆಳಕಂಡ ಮೂಲ ಪ್ರಮಾಣ ಪತ್ರಗಳನ್ನು ನಿಗಧಿಪಡಿಸಿದ ದಿನಾಂಕ: (28-08-2012) ದಂದು ಪರಿಶೀಲನೆಗೆ ಹಾಜರುಪಡಿಸತಕ್ಕದ್ದು.

- ಪಿಯುಸಿ ಪರೀಕ್ಷೆ ಅಥವಾ CBSE ಅಥವಾ ICSE ನಡೆಸುವ 12ನೇ ತರಗತಿ ಪರೀಕ್ಷೆಯ ಪ್ರಮಾಣಪತ್ರ
- ಹುಟ್ಟಿದ ದಿನಾಂಕದ ಪ್ರಮಾಣ ಪತ್ರ(ಎಸ್.ಎಸ್.ಎಲ್.ಸಿ. ಅಥವಾ ಕ್ಯುಮುಲೇಟಿವ್ ದಾಖಲೆ)
- ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು **(No Objection Certificate)** ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರಬೇಕು.

ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ವಿಧವೆಯರು, ಜೀತ ಕಾರ್ಮಿಕರು, ಗ್ರಾಮ ಸಮೂಹ ಪರಿಶೀಲಕರು ಮತ್ತು ಕ್ಯಾಡೆಟ್ ಪರಿವೀಕ್ಷಕರು ಇವರುಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

- ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ.
- ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ.
- ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ
- ಅಂಗವಿಕಲ ಮೀಸಲಾತಿ ಬಗ್ಗೆ ವೈದ್ಯಕೀಯ ಮಂಡಳಿ ಪ್ರಮಾಣ ಪತ್ರ

ಪರಿಶಿಷ್ಟ ಜಾತಿ-ಪರಿಶಿಷ್ಟ ಪಂಗಡ *(ನಮೂನೆ – ಡಿ)* ಮತ್ತು ಪ್ರವರ್ಗ-1 *(ನಮೂನೆ – ಇ)* ಹಾಗೂ 2ಎ, 2ಬಿ, 3ಎ, 3ಬಿ *(ನಮೂನೆ – ಎಫ್)* ಮೀಸಲಾತಿ ಅಭ್ಯರ್ಥಿಗಳು ಕ್ರಮವಾಗಿ ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್ ರವರಿಂದ ಪಡೆದ ಪ್ರಮಾಣ ಪತ್ರಗಳನ್ನು ಪಡೆದಿಟ್ಟು ಕೊಂಡಿರತಕ್ಕದ್ದು.

2 ಸಾಮಾನ್ಯ ಸೂಚನೆಗಳು:

1. ನೈತಿಕ ದುರ್ನಡತೆಯಿಂದಾಗಿ/ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ/ಕೇಂದ್ರ/ಸ್ಥಳೀಯ ಸಂಸ್ಥೆ ಕಚೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ/ವಜಾ ಮಾಡಲ್ಪಟ್ಟಿದ್ದು ಕಂಡು ಬಂದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.
2. ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾಮಾಡಲಾಗುತ್ತದೆ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
3. ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
4. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಆನ್ ಲೈನ್ ಮುಖಾಂತರ ವೆಬ್ ಸೈಟ್ ನಲ್ಲಿ ಲಭ್ಯವಿರುವ ಸೂಚನೆಗಳನ್ನು ಪಾಲಿಸಬೇಕು.
5. ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.
6. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ.
7. ಆಯ್ಕೆ ಸಂಬಂಧವಾಗಿ ಈ ಕಚೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರಕ್ಕೆ ಆಸ್ಪದ ಇರುವುದಿಲ್ಲ.
8. ಅರ್ಜಿ ತುಂಬುವ ವಿಧಾನ ಹಾಗೂ ಹೆಚ್ಚಿನ ವಿವರಗಳು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಕಚೇರಿಯ ಅಧಿಕೃತ ವೆಬ್ ಸೈಟ್ **vasa.dk@gmail.com** ರಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ.
9. ಮತ್ತು ಸ್ಪಷ್ಟೀಕರಣ ಅಗತ್ಯವಿದ್ದಲ್ಲಿ ಸಹಾಯವಾಣಿ ಸಂಖ್ಯೆ: **0824-2220590, 0824-2220592, 0824-2220584** ಮತ್ತು ಟೋಲ್ ಫ್ರೀ : **1077** ರಲ್ಲಿ ಕಚೇರಿಯ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

ಅಭ್ಯರ್ಥಿಗಳ ಮಾಹಿತಿಗಾಗಿ ಕಳೆದ ಬಾರಿಯ ನೇಮಕಾತಿಯಲ್ಲಿ ಆಯ್ಕೆ ಹೊಂದಿದ ವರ್ಗವಾರು ಅಭ್ಯರ್ಥಿಗಳ **cut off marks** ವಿವರ ಈ ಕೆಳಗಿನಂತಿದೆ.

Cut off for Final Selection List of 2011 Recruitment of V.A.'s

Category	Others	Women	Rural	KMS	PDP	PHC	Ex-Serv
GM	90.83	90.83	90.83	92.00	86.67	85.17	64.00
SC	89.50	88.83	-	-	86.17	-	52.33
ST	-	87.67	-	-	-	-	-
CA	-	-	88.83	-	-	-	-
2A	90.17	90.17	-	-	84.67	-	45.17
2B	-	88.50	88.5	-	-	-	-
3A	-	89.00	-	-	-	-	-
3B	-	-	90.17	-	-	-	-

ಡಾ. ಎನ್.ಎಸ್.ಚೆನ್ನಪ್ಪ ಗೌಡ
ಅಧ್ಯಕ್ಷರು,
ಗ್ರಾಮಲೆಕ್ಕಿಗರ ನೇರನೇಮಕಾತಿ ಆಯ್ಕೆ ಪ್ರಾಧಿಕಾರ
ಮತ್ತು ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ಪಿಆರ್. 111